ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ಕೋವಿಡ್-19 ಹಿನ್ನೆಲೆಯಲ್ಲಿ ಖಾಸಗಿ ಶಾಲೆಗಳ ಆರ್ಥಿಕ ಪರಿಸ್ಥಿತಿ ಕುರಿತು

ಶ್ರೀ ಹೆಚ್. ಎಂ. ರಮೇಶ ಗೌಡ(ವಿಧಾನಸಭೆಯಿಂದ ಚುನಾಯಿತರಾದವರು) -

08 (37) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕೋವಿಡ್-19ರ ಹಿನ್ನೆಲೆಯಲ್ಲಿ ಖಾಸಗಿ ಶಾಲೆಗಳ ಆರ್ಥಿಕ ಪರಿಸ್ಥಿತಿಯು ತುಂಬಾ ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಆ) ಖಾಸಗಿ ಶಾಲೆಗಳ ಶುಲ್ಕದ ವಿಷಯವಾಗಿ ಸರ್ಕಾರದಿಂದ ಸ್ಪಷ್ಟ ನಿರ್ದೇಶನ ಇಲ್ಲದಿರುವ ಕಾರಣದಿಂದ ವಿದ್ಯಾರ್ಥಿಗಳು ಹಾಗೂ ಪೋಷಕರಿಗೆ ದಾಖಲಾತಿ ಮಾಡಿಸಲು ಸಾಕಷ್ಟು ಗೊಂದಲಗಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಇ) ರಾಜ್ಯದಲ್ಲಿನ ಅನೇಕ ಖಾಸಗಿ ಶಾಲೆಗಳಿಗೆ ಆರ್. ಟಿ. ಇ. ಹಣ ಬಿಡುಗಡೆಯಾಗದೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಸದರಿ ಹಣವನ್ನು ಯಾವ ಕಾಲಮಿತಿಯೊಳಗೆ ಬಿಡುಗಡೆ ಗೊಳಿಸಲಾಗುವುದು? (ವಿವರ ನೀಡುವುದು)